**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ:**

**ವಿಷಯ:-**

ಐತಿಹಾಸಿಕ ನಗರ ವಿಜಯಪುರದಲ್ಲಿ ವಿಮಾನ ನಿಲ್ದಾಣಕ್ಕೆ 10 ವರ್ಷಗಳ ಹಿಂದೆಯೇ ಭೂಸ್ವಾಧೀನಪಡಿಸಿಕೊಂಡು 2009ರಲ್ಲಿಯೇ ಕಾಮಗಾರಿಗೆ ಚಾಲನೆ ನೀಡಲಾಗಿತ್ತು. ಆದರೆ ಇದುವರೆವಿಗೂ ಕಾಮಗಾರಿಯು ನಿರೀಕ್ಷಿತ ಪ್ರಗತಿ ಕಾಣದಿರುವುದು ಮತ್ತು ಈ ಕಾಮಗಾರಿಯ ಬಗ್ಗೆ ಸರ್ಕಾರವು ಹೆಚ್ಚಿನ ಆಸಕ್ತಿ ವಹಿಸದಿರುವುರಿಂದ ಉಂಟಾದ ಸಮಸ್ಯೆಗಳ ಬಗ್ಗೆ ಮಾನ್ಯ ಮುಖ್ಯ ಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ವಿಜಯಪುರ ವಿಮಾನ ನಿಲ್ದಾಣವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ತೀರ್ಮಾನಿಸಿ ಯಶಸ್ವಿ ಬಿಡ್ಡುದಾರರಾದ ಮೆ॥ಮಾರ್ಗ್‌ರವರನ್ನು ಅಭಿವೃದ್ಧಿದಾರರನ್ನಾಗಿ ಆಯ್ಕೆ ಮಾಡಲಾಗಿತ್ತು. ಆದರೆ ಅಭಿವೃದ್ಧಿದಾರರು ವಿಮಾನ ನಿಲ್ದಾಣಕ್ಕಾಗಿ ಗುರುತಿಸಿರುವ ಜಮೀನುಗಳು ಸಮತಟ್ಟಾಗಿಲ್ಲದಿರುವುದರಿಂದ ಹಾಗೂ ಬಂಡೆಗಳು ಇರುವುದರಿಂದ ವಿಮಾನ ನಿಲ್ದಾಣ ಯೋಜನೆಯು ಆರ್ಥಿಕವಾಗಿ ಮತ್ತು ತಾಂತ್ರಿಕವಾಗಿ ಕಾರ್ಯಸಾಧ್ಯವಲ್ಲವೆಂದು ತಿಳಿಸಿ ಯೋಜನೆಯಿಂದ ಹಿಂದೆ ಸರಿಯಲು ಇಚ್ಚಿಸಿದ್ದರಿಂದ ಅಭಿವೃದ್ಧಿದಾರರೊಂದಿಗೆ ಮಾಡಿಕೊಂಡಿದ್ದ ಯೋಜನಾ ಅಭಿವೃದ್ಧಿ ಒಪ್ಪಂದವನ್ನು ದಿನಾಂಕ:10.01.2014ರಂದು ರದ್ದುಗೊಳಿಸಲಾಗಿರುತ್ತದೆ.

ಪ್ರಸ್ತುತ ವಿಜಯಪುರ ಜಿಲ್ಲೆಯಲ್ಲಿ "ನೋ ಫ್ರೀಲ್" ಮಾದರಿಯಲ್ಲಿ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನೆಯಲ್ಲಿದ್ದು, ವಿಮಾನ ನಿಲ್ದಾಣದ ಅಭಿವೃದ್ಧಿಯ ಹಾಗೂ ಕಾರ್ಯಾಚರಣೆಯ ನಂತರದಲ್ಲಿ ಕೇಂದ್ರ ಸರ್ಕಾರದ ಆರ್‌ಸಿಎಸ್ ಉಡಾನ್ ಯೋಜನೆಯ ಉಪಯುಕ್ತತೆಯನ್ನು ಬಳಸಿಕೊಳ್ಳಲು ಉದ್ದೇಶಿಸಲಾಗಿದೆ.

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ

ಸಂಖ್ಯೆ: ಮೂಅಇ 38 ರಾಅವಿ 2020